ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಕನ್‌ಸ್‌ಲ್ಟೆಂಟ್ ಪ್ರಾಧ್ಯಾಪಕರ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

1021 (1065) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಯುಷ್ ಇಲಾಖೆ ಸರ್ಕಾರಿ ಆಯುರ್ವೇದ/ಯುನಾನಿ ಕಾಲೇಜುಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಕನ್ಸ್‌ಲ್ಟೆಂಟ್ ಪ್ರಾಧ್ಯಾಪಕರನ್ನು ಖಾಯಂಗೊಳಿಸುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಆಯುಷ್ ಇಲಾಖೆಯ ಸರ್ಕಾರಿ ಆಯುರ್ವೇದ/ಯುನಾನಿ ಕಾಲೇಜುಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಕನ್ಸ್‌ಲ್ಟೆಂಟ್ ಪ್ರಾಧ್ಯಾಪಕರನ್ನು ಖಾಯಂಗೊಳಿಸುವ ನಿದರ್ಶನಗಳಿವೆಯೇ ;

(ಇ) ಪ್ರಸ್ತುತ ಆಯುಷ್ ಇಲಾಖೆಯ ಸರ್ಕಾರಿ ಆಯುರ್ವೇದ/ಯುನಾನಿ ಕಾಲೇಜುಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಎಷ್ಟು ಕನ್ಸ್‌ಲ್ಟೆಂಟ್ ಪ್ರಾಧ್ಯಾಪಕರನ್ನು ನೇಮಕಗೊಳಿಸಲಾಗಿದೆ ; ಇವರುಗಳು ಎಷ್ಟು ವರ್ಷದಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ ?